ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 04 ನೇ ಮಾರ್ಚ್, 2020

ಶಿವಮೊಗ್ಗ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿರುವ ವಸತಿ ನಿಲಯಗಳ ಬಗ್ಗೆ

ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

210 (220) ಮಾನ್ಯ ಉಪ ಮುಖ್ಯಮಂತ್ರಿಗಳು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿವಮೊಗ್ಗ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಸತಿ ನಿಲಯಗಳ ಸಂಖ್ಯೆ ಎಷ್ಟು ; (ವಸತಿ ನಿಲಯಗಳಲ್ಲಿನ ದಾಖಲಾತಿ ಮತ್ತು ಹಾಜರಾತಿ ವಿವರ ನೀಡುವುದು)

(ಆ) ಶಿವಮೊಗ್ಗ ಜಿಲ್ಲೆಯಲ್ಲಿ ಒಟ್ಟು ಎಷ್ಟು ವಸತಿ ನಿಲಯಗಳಿವೆ ; ಅದರಲ್ಲಿ ಬಾಲಕಿಯರ ವಸತಿ ನಿಲಯ ಹಾಗೂ ಬಾಲಕರ ವಸತಿ ನಿಲಯಗಳೆಷ್ಟು ; ಈ ವಸತಿ ನಿಲಯಗಳಲ್ಲಿ ವಾರ್ಡನ್‌ಗಳು ಇದ್ದಾರೆಯೇ ; ಕಡಿಮೆ ಇದ್ದಲ್ಲಿ ವಾರ್ಡನ್‌ಗಳನ್ನು ತುಂಬಲು ಸರ್ಕಾರ ಯಾವ ಕ್ರಮ ಕೈಗೊಂಡಿರುತ್ತದೆ ;

(ಇ) ವಸತಿ ನಿಲಯಗಳು ಎಷ್ಟಿವೆ ; ಸ್ವಂತ ಕಟ್ಟಡ ಹೊಂದಿರುವ ಸಂಖ್ಯೆ ಎಷ್ಟು ; ಸ್ವಂತ ಕಟ್ಟಡ ನಿರ್ಮಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಪ್ರತಿ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಒಂದು ತಿಂಗಳಿಗೆ ತಗುಲುವ ವೆಚ್ಚವೆಷ್ಟು ; ಈ ವೆಚ್ಚವನ್ನು ಹೆಚ್ಚಿಸುವ ಬಗ್ಗೆ ಸರ್ಕಾರ ಚಿಂತಿಸುತ್ತಿದೆಯೇ ?